ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 04ನೇ ಫೆಬ್ರವರಿ, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2014

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್.ಎನ್.ಸುಬ್ಬಾರೆಡ್ಡಿ ಅವರು 2014-15ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

2. ಶ್ರೀ ಎಸ್.ಟಿ.ಸೋಮಶೇಖರ್ ಅವರು ಯಶವಂತಪುರ ವಿಧಾನಸಭಾ ಕ್ಷೇತ್ರದ ರಾಮುಹಳ್ಳಿ, ಚಿಕ್ಕನಹಳ್ಳಿ ಮತ್ತು ಚೋಳನಾಯಕನಹಳ್ಳಿಯ ಗ್ರಾಮ ಪಂಚಾಯತಿ ಪರಿಮಿತಿಯಲ್ಲಿ ನಡೆಯುತ್ತಿರುವ ಕಲ್ಲುಗಣಿಗಾರಿಕೆಯಿಂದ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಯು.ಬಿ.ಬಣಕಾರ್ ಅವರು ಸರ್ವಜ್ಞ ಕವಿಗೆ ಸಂಬಂಧಿಸಿದ ಅಬಲೂರು, ಮಾಸೂರ ಹಾಗೂ ಇನ್ನಿತರ ಸ್ಥಳಗಳನ್ನು ಪ್ರವಾಸೋದ್ಯಮ ದೃಷ್ಟಿಯಿಂದ ಅಭಿವೃದ್ಧಿ ಪಡಿಸಲು ಸರ್ವಜ್ಞ ಪ್ರಾಧಿಕಾರ ರಚನೆಯನ್ನು ಅನುಷ್ಠಾನಗೊಳಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಜಿ. ಬೋಪಯ್ಯ ಅವರು ಮೈಸೂರು ಬಂಟ್ವಾಳ ರಸ್ತೆಯಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಿದ್ದರೂ, ಭಾರಿ ವಾಹನಗಳು ಸಂಚರಿಸುತ್ತಿರುವುದರಿಂದ ಸಂಪಾಜೆ ಭಾಗದಲ್ಲಿ ರಸ್ತೆ ಕುಸಿದಿದ್ದು, ಆ ರಸ್ತೆಯನ್ನು ದುರಸ್ತಿಗೊಳಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

೫. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್,ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2. ಶ್ರೀಯುತರುಗಳಾದ ಎಂ.ಕೆ.ಸೋಮಶೇಖರ್, ಟಿ.ವೆಂಕಟರಮಣಯ್ಯ ಮತ್ತು ರುದ್ರಪ್ಪ ಮಾನಪ್ಪ ಲಮಾಣಿ ಅವರುಗಳು ಕರ್ನಾಟಕ ರಾಜ್ಯದ ಪೌರಕಾರ್ಮಿಕರ ದುಸ್ಥಿತಿ ಹಾಗೂ ಅವರ ಮೇಲಿನ ದೌರ್ಜನ್ಯದ ಬಗ್ಗೆ ಚರ್ಚೆ.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm